**ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ಯವರ ನ್ಯಾಯಾಲಯ, ವಿರಾಜಪೇಟೆ**

**ಸಿ.ಸಿ.ನಂಃ 1401/2021**

**ಪಿಡಬ್ಲುಃ 2**

**ದಿನಾಂಕಃ 10.03.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತುಃ-**

**ಮುಖ್ಯವಿಚಾರಣೆಃ ಪಿರ್ಯಾದಿ ಪರ ಶ್ರೀ ಎನ್.ಬಿ.ಡಿ ವಕೀಲರಿಂದಃ-**

ನನ್ನ ಹೇಳಿಕೆಯ ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ.

ನ್ಯಾಯಾಲಯಕ್ಕೆ ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನೋಡಿ ಗುರುತಿಸಿದ್ದರಿಂದ ಅವುಗಳನ್ನು ಈಗಾಗಲೇ ನಿಪಿ 1 ರಿಂದ 4 ಎಂದು ಪಿ.ಡಬ್ಲ್ಯೂ 1 ರವರ ಕಡೆಯಿಂದ ಗುರುತಿಸಲಾಗಿದೆ. ಸಾಕ್ಷಿಯು ಅಧಿಕಾರ ಪತ್ರದ ನೋಟರಿ ಪ್ರತಿಯನ್ನು ಹಾಜರು ಪಡಿಸಿದ್ದನ್ನು, ಅದನ್ನು ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ನೋಡಿ ನಿಪಿ 5 ಎಂದು ಗುರುತಿಸಲಾಯಿತು. ಈ ದಾಖಲೆಗಳನ್ನು ಪರಿಶೀಲಿಸಿ ನ್ಯಾಯಾಲಯವು ಆರೋಪಿಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಕೋರುತ್ತೇನೆ.

**ಮುಖ್ಯವಿಚಾರಣೆಃ ಮುಕ್ತಾಯ**

**ಪಾಟೀಸವಾಲುಃ ಆರೋಪಿ ಪರ ವಕೀಲರು ಪಾಟೀಸವಾಲಿಗೆ ಸಮಯಾವಕಾಶ ಕೋರಿದ್ದು ಸಮಾಯಾವಕಾಶ ನೀಡಲಾಯಿತು.**

ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

**ಓ.ಹೇ.ಕೇ.ಸ.ಇ**

**ಸಹಿ/-**
**ಪ್ರದೀಪ ಪೋತದಾರ**
**ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ**
**ವಿರಾಜಪೇಟೆ**